1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ

Spl.C.153/2023

ದಿಃ 04.07.2024
(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-7 Pw-4

ಹೆಸರು : ಕೃಷ್ಣಪ್ಪ
ತಂದೆಯ ಹೆಸರು : ಚನ್ನಪ್ಪ
ವಯಸ್ಸು : 55 ವರ್ಷ
ಉದ್ಯೋಗ : ವ್ಯವಸಾಯ
ವಾಸಸ್ಥಳ : ಕೋಡಿದೊಡ್ಡಿಪಾಳ್ಯ

ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ

1. ನನಗೆ ಚಾಸಾ.1 ಯಾರು ಎಂಬುದು ಗೊತ್ತಿಲ್ಲ.

2. ನನಗೆ ಚಾಸಾ.2ರಿಂದ 6 ಮತ್ತು 8 ಗೊತ್ತು.

3. ಈಗ ನ್ಯಾಯಾಲಯದ ಮುಂದೆ ಹಾಜರಿರುವ ಆರೋಪಿತರು ಯಾರು ಎಂಬುದು ನನಗೆ ಗೊತ್ತಿಲ್ಲ.

4. ಈ ಪ್ರಕರಣದಲ್ಲಿ ನನಗೇನೂ ಮಾಹಿತಿ ಇರುವುದಿಲ್ಲ.

5. ನಾನು ಯಾವುದೇ ಘಟನೆಯನ್ನು ನೋಡಿರುವುದಿಲ್ಲ.

6. ಪೊಲೀಸರು ನನ್ನನ್ನು ಯಾವ ಕಾಲಕ್ಕೂ ಯಾವುದೇ ರೀತಿಯಲ್ಲಿ ವಿಚಾರಣೆ ಮಾಡಿರುವುದಿಲ್ಲ ಮತ್ತು ನನ್ನಿಂದ ಯಾವುದೇ ಹೇಳಿಕೆಗಳನ್ನು ದಾಖಲಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)**

<u>ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ</u>

7. ಈಗ ನನಗೆ ಓದಿ ಹೇಳಿದ ನಿ.ಪಿ.4 ರಂತೆ, "ದಿಃ23.07.2023 ರಂದು ಸಂಜೆ 7.30 ಗಂಟೆಯ ಸಮಯದಲ್ಲಿ ನಾನು ಕಿರಣ್‌ರವರ ಅಂಗಡಿಯ ಬಳಿ ಇರುವಾಗ ಕೋಡಿದೊಡ್ಡಿಪಾಳ್ಯದ

.........................................

.........................................

.........................................

.........................................

ಕೊಲೆ ಬೆದರಿಕೆ ಹಾಕಿ ಜಾತಿ ನಿಂದನೆ ಮಾಡಿ ದೌರ್ಜನ್ಯವೆಸಗಿರುತ್ತಾರೆ, ಅವರುಗಳ ಮೇಲೆ ಕ್ರಮ ಜರುಗಿಸಬೇಕೆಂದು ಕೋರಿದೆ" ಎಂದು ದಿಃ25.07.2023 ರಂದು ಪೊಲೀಸರ ಮುಂದೆ ನಾನು ಹೇಳಿಕೆ ನೀಡಿರುತ್ತೇನೆಂದು ಸೂಚಿಸುವುದು ಸರಿಯಲ್ಲ.

9. ಈಗ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎನ್ನುವುದು ಸರಿಯಲ್ಲ.

<u>ಪಾಟೀ ಸವಾಲುಃ ಶ್ರೀ. ಎಸ್.ಸಿ.ಎಸ್., ವಕೀಲರಿಂದ ಆರೋಪಿಗಳ ಪರವಾಗಿಃ ಏನೂ ಇಲ್ಲವೆಂದು ತಿಳಿಸಿರುತ್ತಾರೆ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಜಿ ಡಿ ಮಹಾವರ್ಕರ್)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.